# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 09.08.2011**

## "ಭಾರತ ಬಿಟ್ಟು ತೊಲಗಿ ಆಂದೋಲನ"

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಇಂದು ಬ್ರಿಟಿಷರೇ ಭಾರತ ಬಿಟ್ಟು ತೊಲಗಿ ಆಂದೋಲನ ಅಂಗವಾಗಿ ಮಹಾತ್ಮ ಗಾಂಧೀಜಿಯವರ ಪ್ರತಿಮೆಯ ಹತ್ತಿರ ಸರ್ವಧರ್ಮ ಪ್ರಾರ್ಥನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ಮಹಾತ್ಮ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಉಪ ಮಹಾಪೌರರು, ಆಡಳಿತ ಪಕ್ಷದ ನಾಯಕರು, ಜೆ.ಡಿ.ಎಸ್. ಪಕ್ಷದ ನಾಯಕರು, ಆಯುಕ್ತರು, ಅಪರ ಆಯುಕ್ತರು (ಆಡಳಿತ) ರವರು ಹಾಗೂ ಶಾಲಾ ಮಕ್ಕಳು ಮತ್ತು ಇತರೇ ಪಾಲಿಕೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 09.08.2011**

## *ಪಾಲಿಕೆಯ ಸಹ ಕಂದಾಯ ಅಧಿಕಾರಿ (ಶ್ರೀರಾಮಮಂದಿರ) ಉಪ ವಿಭಾಗ ಹಾಗೂ ಸಹ ಕಂದಾಯ ಅಧಿಕಾರಿ (ರಾಜಾಜಿನಗರ) ಉಪ ವಿಭಾಗ ಕಛೇರಿಗಳ ಸ್ಥಳಾಂತರ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಾಜಾಜಿನಗರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಕಂದಾಯ ಅಧಿಕಾರಿ (ರಾಜಾಜಿನಗರ) ವ್ಯಾಪ್ತಿಯ ಸಹ ಕಂದಾಯ ಅಧಿಕಾರಿ (ಶ್ರೀರಾಮಮಂದಿರ) ಉಪ ವಿಭಾಗಕ್ಕೆ ಸಂಬಂಧಪಟ್ಟ ವಾರ್ಡ್ ನಂ.97, 98 ಮತ್ತು 108 ಹಾಗೂ ಸಹ ಕಂದಾಯ ಅಧಿಕಾರಿ (ರಾಜಾಜಿನಗರ) ಉಪ ವಿಭಾಗಕ್ಕೆ ಸಂಬಂಧಪಟ್ಟ ವಾರ್ಡ್ ನಂ.99, 100, 101 ಮತ್ತು 107ರ ಕಂದಾಯ ಇಲಾಖೆಗೆ ಸಂಬಂಧಿಸಿದ ಕಛೇರಿಗಳು ಹಾಲಿ ಜಂಟಿ ಆಯುಕ್ತರು (ಪಶ್ಚಿಮ) ರವರ ಕಛೇರಿಯ ಹಿಂಭಾಗದ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈಗ ಈ ಕಛೇರಿಗಳನ್ನು ರಾಜಾಜಿನಗರ 2ನೇ ಬ್ಲಾಕ್‌ನಲ್ಲಿರುವ ನಗರ ಪಾಲಿಕೆ ವಾಣಿಜ್ಯ ಕಟ್ಟಡದ (ಆರ್.ಟಿ.ಓ. ಕಛೇರಿ) ಮೊದಲನೆ ಮಹಡಿಯಲ್ಲಿ ಹೊಸದಾಗಿ ನಿರ್ಮಿಸಿರುವ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ ಎಂದು ಜಂಟಿ ಆಯುಕ್ತರು (ಪಶ್ಚಿಮ) ವಲಯ ರವರು ತಿಳಿಸಿರುತ್ತಾರೆ. ಸಂಬಂಧಪಟ್ಟ ಸಾರ್ವಜನಿಕರು ಇನ್ನು ಮುಂದೆ ಸ್ಥಳಾಂತರಗೊಂಡಿರುವ ಕಛೇರಿಗಳನ್ನು ತಮ್ಮ ಕೆಲಸ ಕಾರ್ಯಗಳಿಗೆ ಸಂಪರ್ಕಿಸಲು ಕೋರಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**